# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಿನಾಂಕ :- 19/12/2020 ರಂದು ವಾರ್ಡ್-31ರ ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿ

**ಸಭೆಗೆ ಹಾಜರಿದ್ದ ಅಧಿಕಾರಿಗಳು ಮತ್ತು ಸಾರ್ವಜನಿಕರು :-**

1. ಶ್ರೀ. ಶ್ರೀ.ರವಿವಡ್ಡರ್, ನೋಡಲ್ ಅಧಿಕಾರಿ
2. ಶ್ರೀ. ಬಸವರಾಜು ವಾರ್ಡ್ ಅಭಿಯಂತರರು
3. ಶ್ರೀ. ವಿನಯ ಕಿರಿಯ ಆರೋಗ್ಯ ಪರೀವಿಕ್ಷಕರು
4. ಶ್ರೀ. ರಾಹುಲ್. ಸಿವಿಲ್ ಇಂಜಿನೀಯರ್ ಬಿ.ಡಬ್ಲೂ.ಎಸ್.ಎಸ್.ಬಿ
5. ಶ್ರೀ ಖಮರ್ ಪಾಷ, ಅನ್ವರ್ ಲೇಔಟ್
6. ಶ್ರೀ ರಾಘವೇಂದ್ರ, ಅಶೋಕ ನಗರ
7. ಶ್ರೀ ಆಲಿ, ಅನ್ವರ್ ಲೇಔಟ್
8. ಶ್ರೀ ಮುರಳಿ, ಅಶೋಕ ನಗರ
9. ಶ್ರೀ ಸಲೀಮ್ ಕುಶಾಲನಗರ

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ನೋಡಲ್ ಅಧಿಕಾರಿರವರು ಎಲ್ಲಾ ಸದಸ್ಯರು ಹಾಗೂ ಅಧಿಕಾರಿಗಳನ್ನು ಸ್ವಾಗತಿಸಿದರು. ವಾರ್ಡ್-31 ರ ವಾರ್ಡ್ ಸಮಿತಿ ಸಭೆಯನ್ನು ತಮಿಳ್ ಸಂಘ ಸ್ಕೂಲ್‌ನಲ್ಲಿ ನಡೆಸಲಾಯಿತು. ನೋಡಲ್ ಅಧಿಕಾರಿಗಳು ಸಭೆಯಲ್ಲಿ ಕಾರ್ಯಸೂಚಿಗಳನ್ನು ಹಾಗೂ ಸಾರ್ವಜನಿಕರ ಕುಂದು ಕೊರತೆಗಳನ್ನು ಸದಸ್ಯರು ಮತ್ತು ಅಧಿಕಾರಿಗಳ ಜೋತೆಯಲ್ಲಿ ಚರ್ಚಿಸಿದರು ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳವ ಬಗ್ಗೆ ಸಂಬಂದಪಟ್ಟ ಅಧಿಕಾರಿ ಹಾಗೂ ನೌಕರರುಗಳಿಗೆ ಈ ಕೆಳಕಂಡತೆ ತಿಳಿಸಲಾಗಿರುತ್ತದೆ.

❖ **ಕಾರ್ಯಸೂಚಿಗಳು :**

1. ಮಾನ್ಯ ಉಚ್ಚ ನ್ಯಾಯಾಲಯದ ರಿಟ್ ಪಿಟಿಷನ್ ನಂ:10096/2020 (GIM-PIL) ರ ನಿರ್ದೇಶನದಲ್ಲಿ ತಿಳಿಸಿರುವಂತೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ Begging and Hawking Childern Identification Survey ಕೈಗೋಳ್ಳಬೇಕಾಗಿದ್ದು ವಾರ್ಡ್‌ಗಳಲ್ಲಿ ಟ್ರಾಫಿಕ್ ಸಿಗ್ನಲ್‌ಗಳಲ್ಲಿ ಕೊಳಗೇರಿಗಳಲ್ಲಿ (ಸ್ಲಂ), ಬಸ್ ಮತ್ತು ರೈಲ್ವೆನಿಲ್ದಾಣ ಹಾಗೂ ಇತರೆ ಸ್ಥಳಗಳನ್ನು ಸ್ಥಳಿಯ ನಿವಾಸಿ ಕಲ್ಯಾಣ ಸಂಘ ( Residential Welfare Association ) ಹಾಗೂ ಸ್ವಯಂ ಸೇವಾ ಸಂಘಗಳ ( NGO ) ಮುಖೇನ ಗುರುತಿಸಿ ನಿಗಧಿತ ನಮುನೆಯಲ್ಲಿ ಮಾಹಿತಿಯನ್ನು ಕಲೆಹಾಕಲು ಕ್ರಮ ವಹಿಸುವುದು.
2. ಮಾನ್ಯ ಉಚ್ಚ ನ್ಯಾಯಾಲಯದ ರಿಟ್ ಪಿಟಿಷನ್ ನಂ 15768/2013 ರ ಹಿನ್ನಲೆಯಲ್ಲಿ ಹೊರಡಿಸಲಾದ ಸರ್ಕಾರದ ಆದೇಶದಲ್ಲಿ 2020-21 ನೇ ಸಾಲಿನಲ್ಲಿ ಶಾಲೆಯಿಂದ ಹೊರಗುಳಿದಿರುವ ಮಕ್ಕಳನ್ನು ಗುರುತಿಸಿ,

ಶಾಲೆಗೆ ಹಾಜರಾಗಲು ನಗರ ಸ್ಥಳೀಯ ಸಂಸ್ಥೆಗಳು (ಬಿ.ಬಿ.ಎಂ.ಪಿ ಒಳಗೊಂಡಂತೆ) ವಾಡ್ ಸದಸ್ಯರನ್ನು ಅದರ ಅಧ್ಯಕ್ಷರನ್ನಾಗಿ ವಾರ್ಡ್ ಕಮಿಟಿಯನ್ನು ರಚಿಸತಕ್ಕದ್ದು.ಆ ವಾರ್ಡ್ ವ್ಯಾಪ್ತಿಯ ಮುಖ್ಯೋಪಾಧ್ಯಾಯರು, ಅಂಗನವಾಡಿ ಕಾರ್ಯಕರ್ತರು ಎನ್.ಜಿ.ಓ ಗಳನ್ನು ಸದಸ್ಯರನ್ನಾಗಿ ಮಾಡಿಕೊಂಡು ಕಾಲಕಾಲಕ್ಕೆ ಸದರಿ ಸಮಿತಿಯು ಕಾಲಕಾಲಕ್ಕೆ ತಪಾಸಣೆ ನಡೆಸಿ, ಶಾಲೆಯಿಂದ ವಂಚಿತರಾದ ಹಾಗೂ ಕಟ್ಟಡ ನಿರ್ಮಾಣ ಸ್ಥಳಗಳಲ್ಲಿ ಬಸ್ ನಿಲ್ದಾಣ ರೈಲ್ವೇ ನಿಲ್ದಾಣ ಕಾರ್ಖಾನೆಗಳು ಮಾರುಕಟ್ಟೆ ಮುಂತಾದ ಸ್ಥಳಗಳಲ್ಲಿ ಮಕ್ಕಳನ್ನು ಗುರುತಿಸಿ ಸಂಬಂದಿಸಿದ ಇಲಾಖೆಗಳಾದ ಮಕ್ಕಳ ಕಲ್ಯಾಣಾಧಿಕಾರಿ ( CDPO ) ಕಾರ್ಮಿಕ ಇಲಾಖೆ ಹಾಗೂ ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ತಿಳಿಸುವ ಬಗ್ಗೆ ಕ್ರಮ ವಹಿಸುವುದುಎಂಬುದಾಗಿ ಇದ್ದು, ಇದಕ್ಕೆ ಪ್ರತ್ಯೇಕವಾದ ಸಿದ್ದಪಡಿಸಲಾಗಿದ್ದು ಸಧದಲ್ಲೇ ಈ ಪ್ರಕ್ರಿಯೆ ಕೈಗೊಳ್ಳುವ ಬಗ್ಗೆ ಪೂರ್ವಸಿದ್ಧತೆಗಳನ್ನು ಮಾಡಿಕೊಳ್ಳತಕ್ಕದ್ದು ಹಾಗೂ ಸಭೆಯಲ್ಲಿ ಚರ್ಚಿಸುವುದು.

3. ವಾರ್ಡಿನ ವ್ಯಾಪ್ತಿಯಲ್ಲಿ ಪ್ರದೇಶದಲ್ಲಿ ರಾತ್ರಿಹೊತ್ತು ತಪಾಸಣೆ ಕೈಗೊಂಡು ಬೀದಿ ಬದಿ ಮಲುಗುವವರ ನಿರಾಶ್ರಿತರ ಸಂಖ್ಯೆಯನ್ನು ಕಲೆಹಾಕಲು ಅಗತ್ಯ ಕ್ರಮಹಿಸುವುದು.

**ಕ್ರಮ : ಈ ಮೇಲೆ ಸೂಚಿಸಿರುವಂತಹ ಕಾರ್ಯಸೂಚಿಗಳನ್ನು ಕೂಡಲೆ ಕಾರ್ಯಚರಣೆ ತರಬೇಕಾಗಿ ವಾರ್ಡ್ ಸಮಿತಿ ಸಭೆಗೆ ಹಾಜರಿದ್ದ ಎಲ್ಲಾ ಸಾರ್ವಜನಿಕರು ಹಾಗೂ ಅಧಿಕಾರಿಗಳಿಗೆ ಸೂಚಿಸಿದರು ಹಾಗೂ ಎಲ್ಲಾ ಸಾರ್ವಜನಿಕರು ಹಾಗೂ ಅಧಿಕಾರಿಗಳು ಸಕಾರಾತ್ಮಕ ಪ್ರತಿಕ್ರಯೆ ನೀಡಿದರು.**

➢ **ಕಾಮಗಾರಿ ಇಲಾಖೆಗೆ ಸಂಬಂದಿಸಿರುವುದು**

1. ವಾರ್ಡ್ ವ್ಯಾಪ್ತಿಯಲ್ಲಿ ಪ್ರಾರಂಭಗೊಂಡಿರುವ ಕಾಮಗಾರಿಗಳನ್ನು ಶೀಘ್ರದಲ್ಲೆ ಪೂರ್ಣಗೊಳಿಸಲು ಸೂಚಿಸಿದರು.
2. ವಾರ್ಡ್ ವ್ಯಾಪ್ತಿಯಲ್ಲಿ ಫೂಟ್ಪಾತ್ ಒತ್ತುವರಿ ಮಾಡಿಕೊಂಡಿರುವವರನ್ನು ಕೂಡಲೆ ತೆರುಗೊಳಿಸಲು ಸೂಚಿಸಿದರು.
3. ವಾರ್ಡ್ ವ್ಯಾಪ್ತಿಯಲ್ಲಿನ ರಸ್ತೆ ಗುಂಡಿಗಳನ್ನು ಮುಚ್ಚಲು ಕೂಡಲೆ ಕ್ರಮ ವಹಿಸಲು ಸೂಚಿಸಿದರು.

**ಕ್ರಮ : ಈ ಮೇಲೆ ಸೂಚಿಸಿರುವಂತಹ ಸಮಸ್ಯೆಗಳಿಗೆ ಪರಿಹರಿಸುವಂತೆ ವಾರ್ಡ್ ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು**

➢ **ಘನತ್ಯಾಜ್ಯ ಇಲಾಖೆಗೆ ಸಂಬಂದಿಸಿರುವುದು**

1. ಕಿರಿಯ ಆರೋಗ್ಯ ಪರೀವಿಕ್ಷಕರುಇಂದಿನ ಸಭೆಯಲ್ಲಿ ಎದ್ದುನಿಂತು ಇಂದು 54–ಪೌರಕಾರ್ಮಿಕರು, 12–ಆಟೋ, 3–ಕಾಂಪ್ಯಾಕ್ಟರ್ ಹಾಜರಾಗಿವೆ ಎಂದು ತಿಳಿಸಿದರು.
2. ಈ ವಾರ್ಡ್ ವ್ಯಾಪ್ತಿಯಲ್ಲಿ ಹೆಚ್ಚು ಜನಸಾಂದ್ರತೆ ಇದ್ದು, ಕೇವಲ 12 ಆಟೋಗಳಿಂದ ಕಸ ನಿರ್ವಹಣೆ ಕಷ್ಟಕರವಾಗಿದ್ದು ಕೂಡಲೆ ಅಟೋಗಳನ್ನು 12 ರಿಂದ 20 ಸಂಖ್ಯೆಗೆ ಹೆಚ್ಚಿಸಲು ಕೋರಿದ್ದು ಸಭೆ ಮುಖಾಂತರ ಶಿಫಾರಸ್ಸು ಮಾಡುತ್ತೇನೆ ಎಂದು ಕಿರಿಯ ಆರೋಗ್ಯ ಪರೀವಿಕ್ಷಕರಿಗೆ ಸೂಚಿಸಿದರು.
3. ವಾರ್ಡ್ ವ್ಯಾಪ್ತಿಯಲ್ಲಿ ಕಸ ವಿಗಂಡನೆ ಹಾಗೂ ವಿಂಗಡಣೆ ವಿಲೇವಾರಿ ಸರಿಯಾಗಿ ನಿರ್ವಹಣೆಯಾಗುತ್ತಿಲ್ಲ ಕೂಡಲೆ ಹಸಿ ತ್ಯಾಜ್ಯ ಮತ್ತು ಒಣತ್ಯಾಜ್ಯ ವಿಗಂಡಣೆ ಮಾಡಲು ಸೂಚಿಸಿದರು.

**ಕ್ರಮ ಕಿರಿಯ ಆರೋಗ್ಯ ಪರೀವಿಕ್ಷಕರು ಈ ಮೇಲೆ ಸೂಚಿಸಿರುವ ಸಮಸ್ಯೆಗಳಿಗೆ ಕೂಡಲೆ ಕ್ರಮ ವಹಿಸಲು ಸೂಚಿಸಿದರು.**

➢ **ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಗೆ ಸಂಬಂಧಿಸಿರುವುದು**

1. ವಾರ್ಡ್ ವ್ಯಾಪ್ತಿಯಲ್ಲಿನ ಶಾಂಪುರ ಮುಖ್ಯ ರಸ್ತೆಯಲ್ಲಿ ಸ್ಯಾನಿಟರಿ ಕಾಮಗಾರಿ ನಿರ್ವಹಿಸಿದ್ದು ರಸ್ತೆಯಲ್ಲಿರುವ ಮಣ್ಣನ್ನು ತೇರುವುಗೊಳಿಸಿ ವೆಟ್ ಮಿಕ್ಸ್ ಹಾಕಲು ಸೂಚಿಸಿದರು.
2. ವಾರ್ಡ್ ವ್ಯಾಪ್ತಿಯಲ್ಲಿ ಪ್ರತಿ ಮನೆಗೆ ವಾಟರ್ ಮೀಟರ್ ಹೆಚ್ಚಿನ ಸಂಖ್ಯೆಯಲ್ಲಿ ಹಾಕಿಸಿಕೊಳ್ಳಲು ಸಾರ್ವಜನಿಕರಿಗೆ ಅರಿವು ಮೂಡಿಸಲು ಸೂಚಿಸಿದರು.
3. ವಾರ್ಡ್ ವ್ಯಾಪ್ತಿಯಲ್ಲಿ ಪ್ರಾರಂಭಗೊಂಡಿರುವ ಕಾಮಗಾರಿಗಳನ್ನು ಶೀಘ್ರದಲ್ಲೆ ಪೂರ್ಣಗೊಳಿಸಲು ಸೂಚಿಸಿದರು.

ಕ್ರಮ : **ಈ ಮೇಲೆ ಸೂಚಿಸಿರುವಂತಹ ಸಮಸ್ಯೆಗಳನ್ನು ಪರಿಹರಿಸುವಂತೆ ಸಹಾಯಕ ಅಭಿಯಂತರರಿಗೆ ಈ ಸಭೆ ಮುಖಾಂತರ ಸೂಚಿಸಲಾಯಿತು.**

➢ **ಸ್ಟ್ರೀಟ್ ಲೈಟ್ ಇಲಾಖೆಗೆ ಸಂಬಂದಿಸಿರುವುದು**

1. ವಾರ್ಡ್ ವ್ಯಾಪ್ತಿಯಲ್ಲಿ ಬೀದಿ ದೀಪಗಳು ಹೆಚ್ಚಾಗಿ ರೀಪೇರಿಗಳಿಗೆ ಒಳಗಾಗುತ್ತಿದ್ದು ಕೂಡಲೆ ಕಾರ್ಯಾಚರಣೆ ಹಾಗೂ ಬೀದಿ ದೀಪ ನಿರ್ವಹಣೆ ಬಗ್ಗೆ ಅಥವಾ ಕುಂದು ಕೊರತೆಗಳನ್ನು ಹಾಲಿಸಲು ಈ ಇಲಾಖೆಯಿಂದ ಯಾವದೇ ಅಧಿಕಾರಿ ವರ್ಗದವರು ಹಾಜರಿರದ ಕಾರಣ ಮುಂದಿನ ಸಭೆಯಲ್ಲಿ ತಪ್ಪದೆ ಹಾಜರಾಗಲು ಸೂಚಿಸಿದರು.

➢ **ಪೊಲೀಸ್ ಇಲಾಖೆಗೆ (ಸಿವಿಲ್) ಸಂಬಂದಿಸಿರುವುದು**

1. ವಾರ್ಡ್ ವ್ಯಾಪ್ತಿಯಲ್ಲಿ ಗಾಂಜಾ ಸೇವನೆ, ಮದ್ಯ ಕುಡಿಯುವುದು, ಕಳ್ಳರ ಹಾವಳಿ ಹೆಚ್ಚಾಗಿ ಕಂಡುಬಂದಿದ್ದು ಪೊಲೀಸ್ ಇಲಾಖೆ ಸಭೆಗೆ ಹಾಜಾರಾದೆ ಇರುವ ಕಾರಣದಿಂದ ಮುಂದಿನ ಸಭೆಯಲ್ಲಿ ಸಾರ್ವಜನಿಕರ ಕುಂದು ಕೊರತೆಗಳನ್ನು ಕೆಳಿಸಿಕೊಳ್ಳಲು ತಪ್ಪದೆ ಸಭೆಗೆ ಹಾಜರಾಲು ಸೂಚಿಸಿದೆ.

➢ **ಪೊಲೀಸ್ ಇಲಾಖೆಗೆ (ಟ್ರಾಫಿಕ್) ಸಂಬಂದಿಸಿರುವುದು**

1. ವಾರ್ಡ್ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ವಾಹನಗಳ ನೀಲುಗಡೆ, ನಿರ್ಜೀವವಾದ ವಾಹನಗಳ (Dead Vehical) ತೆರುವುಗೊಳಿಸುದು...ಇತರೆ ಸಮಸ್ಯೆಗಳು ಹಾಲಿಸಲು ಪೊಲೀಸ್ ಇಲಾಖೆ ಸಭೆಗೆ ಹಾಜಾರಾದೆ ಇರುವ ಕಾರಣದಿಂದ ಮುಂದಿನ ಸಭೆಯಲ್ಲಿ ಸಾರ್ವಜನಿಕರ ಕುಂದು ಕೊರತೆಗಳನ್ನು ಕೆಳಿಸಿಕೊಳ್ಳಲು ತಪ್ಪದೆ ಸಭೆಗೆ ಹಾಜರಾಲು ಸೂಚಿಸಿದೆ.

ಈ ಎಲ್ಲಾ ವಿಷಯಗಳ ಬಗ್ಗೆ ತುರ್ತಾಗಿ ಕ್ರಮ ಕೈಗೊಳ್ಳಲು ಸಂಬಂದಪಟ್ಟವರಿಗೆ ಸೂಚಿಸುತ್ತಾ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಿದೆ.

21/12/2020

**ಸದಸ್ಯ ಕಾರ್ಯದರ್ಶಿ ವಾರ್ಡ್ –31** **ನೋಡಲ್ ಅಧಿಕಾರಿ ವಾರ್ಡ್–31**

**ಪ್ರತಿಗಳನ್ನು:**

- **ಮಾನ್ಯ ಆಡಳಿತಾಧಿಕಾರಿರವರ ಆಪ್ತ ಶಾಖೆಗೆ ಸಲ್ಲಿಸಿ ಆಡಳಿತಾಧಿಕಾರಿರವರ ಗಮನಕ್ಕೆ ತರಲು ಕೊರಿದೆ.**
- **ಮಾನ್ಯ ಆಯುಕ್ತರುರವರ ಅಪ್ತಶಾಖೆಗೆ ಸಲ್ಲಿಸಿ ಆಯುಕ್ತರವರ ಗಮನಕ್ಕೆ ತರಲು ಕೊರಿದೆ**

- ಮಾನ್ಯ ವಲಯ ಆಯುಕ್ತರುರವರ ಅಪ್ತಶಾಖೆಗೆ ಸಲ್ಲಿಸಿ ಆಯುಕ್ತರವರ ಗಮನಕ್ಕೆ ತರಲು ಕೋರಿದೆ.
- ಮಾನ್ಯ ಜಂಟಿ ಆಯುಕ್ತರು (ಪೂರ್ವ) ರವರ ಅಪ್ತಶಾಖೆಗೆ ಸಲ್ಲಿಸಿ ಆಯುಕ್ತರವರ ಗಮನಕ್ಕೆ ತರಲು ಕೋರಿದೆ.
- ಮುಖ್ಯ ಅಭೀಯಂತರರು (ಪೂರ್ವ) ರವರ ಮಾಹಿತಿಗಾಗಿ ಸಲ್ಲಿಸಿದೆ.
- ಕಾರ್ಯಪಾಲಕ ಅಭಿಯಂತರರು, ಪುಲಿಕೇಶಿನಗರ ರವರ ಮಾಹಿತಿಗಾಗಿ ಸಲ್ಲಿಸಿದೆ.
- ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೆ.ಜಿ.ಹಳ್ಳಿ ಉಪ-ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
- ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನ ತ್ಯಾಜ್ಯ) ಪುಲಕೇಶಿನಗರ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
- ಸಹಾಯಕ ಕಂದಾಯ ಅಧಿಕಾರಿ (ಕೆ.ಜಿ. ಹಳ್ಳಿ) ಉಪವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
- ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) ನೇತಾಜಿ ರಸ್ತೆ, ರವರ ಮಾಹಿತಿಗಾಗಿ ಸಲ್ಲಿಸಿದೆ.
- ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೆಸ್ಕಾಂ) ರವರ ಮಾಹಿತಿಗಾಗಿ ಸಲ್ಲಿಸಿದೆ.
- ಹಿರಿಯ ವೈದ್ಯಾಧಿಕಾರಿಗಳು (ಪುಲಿಕೇಶಿನಗರ) ರವರ ಮಾಹಿತಿಗಾಗಿ ಸಲ್ಲಿಸಿದೆ
- ಸಹಾಯಕ ನಿರ್ದೇಶಕರು (ಪೂರ್ವ) ಪಶು ಪಾಲನೆ ಇಲಾಖೆ ರವರ ಮಾಹಿತಿಗಾಗಿ ಸಲ್ಲಿಸಿದೆ.
- ವಲಯ ಅರಣ್ಯಾಧಿಕಾರಿಗಳು (ಪೂರ್ವ) ರವರ ಮಾಹಿತಿಗಾಗಿ ಸಲ್ಲಿಸಿದೆ.
- ಪೊಲೀಸ್ ಇನ್ಸ್‌ಪೆಕ್ಟರ್ (ಸಿವಿಲ್) ಕೆ.ಜಿ.ಹಳ್ಳಿ ರವರ ಮಾಹಿತಿಗಾಗಿ ಸಲ್ಲಿಸಿದೆ.
- ಪೊಲೀಸ್ ಇನ್ಸ್‌ಪೆಕ್ಟರ್ (ಸಿವಿಲ್) ಡಿ.ಜೆ ಹಳ್ಳಿ  ರವರ ಮಾಹಿತಿಗಾಗಿ ಸಲ್ಲಿಸಿದೆ.
- ಪೊಲೀಸ್ ಇನ್ಸ್‌ಪೆಕ್ಟರ್ (ಟ್ರಾಫಿಕ್) ಕೆ.ಜಿ.ಹಳ್ಳಿ ರವರ ಮಾಹಿತಿಗಾಗಿ ಸಲ್ಲಿಸಿದೆ.
- ಕಛೇರಿ ಪ್ರತಿ.